**ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿ ಹುದ್ದೆಗಳಿಗೆ ಅರ್ಜಿ ಅಹ್ವಾನ**

ಶಿವಮೊಗ್ಗ, ಜುಲೈ 30: ಶಿವಮೊಗ್ಗದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಜಿಲ್ಲೆಯ 7 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಎಲ್ಲಾ ತಾಲೂಕುಗಳ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿ ಹುದ್ದೆಗಳನ್ನು ಭರ್ತಿ ಮಾಡಲಿದೆ. ಗೌರವಧನ ಆಧಾರದ ಮೇಲೆ ಈ ಹುದ್ದೆಗಳಿಗೆ ಭರ್ತಿ ಮಾಡಲಿದೆ.ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಮತ್ತು ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಸ್ಥಳೀಯ ಅಭ್ಯರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದ. ಅಂಗನವಾಡಿಯಲ್ಲಿ ಕೆಲಸ ಮಾಡಲು ಇಚ್ಛಿಸುವವರು ಈ ಸದುಪಯೋಗವನ್ನು ಪಡೆದುಕೊಳ್ಳಬೇಕು.

ಶಿವಮೊಗ್ಗ: ಕಾರ್ಯಕರ್ತೆಯರು-34, ಸಹಾಯಕಿಯರು-118, ಭದ್ರಾವತಿ: ಕಾರ್ಯಕರ್ತೆಯರು -10, ಸಹಾಯಕಿಯರು -72, ಹೊಸನಗರ: ಕಾರ್ಯಕರ್ತೆಯರು-07, ಸಹಾಯಕಿಯರು -35, ಸಾಗರ: ಕಾರ್ಯಕರ್ತೆಯರು-21, ಸಹಾಯಕಿಯರು- 62, ಶಿಕಾರಿಪುರ: ಕಾರ್ಯಕರ್ತೆಯರು-08, ಸಹಾಯಕಿಯರು -55, ಸೊರಬ: ಕಾರ್ಯಕರ್ತೆಯರು-38, ಸಹಾಯಕಿಯರು -65, ತೀರ್ಥಹಳ್ಳಿ: ಕಾರ್ಯಕರ್ತೆಯರು 09, ಸಹಾಯಕಿಯರು- 41

ಆಸಕ್ತ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಆಗಸ್ಟ್ 29 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ ಹಾಗೂ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪಡೆಯಬಹುದಾಗಿದೆ. Visit to "KarnatakaHelp.in"